ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರ ವೇತನ ಬಗ್ಗೆ

ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-

995(1084) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕಾರ್ಮಿಕರ ಸಂಖ್ಯೆ ಎಷ್ಟು ; ಬಡತನ ರೇಖೆಗಿಂತ ಕೆಳಗಿರುವ ಕಾರ್ಮಿಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಕಾರ್ಮಿಕರಿಗೆ ತಿಂಗಳಿಗೆ ಸರಿಯಾಗಿ ವೇತನವು ದೊರೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಕಾರ್ಮಿಕರಿಗೆ ಜೀವನ ನಡೆಸಲು ಕಷ್ಟವಾಗುವುದಿಲ್ಲವೇ ; ಈ ಬಗ್ಗೆ ಅಧಿಕಾರಿಗಳಿಗೆ ಸರ್ಕಾರದ ವತಿಯಿಂದ ನೀಡಿದ ನಿರ್ದೇಶನಗಳೇನು ;

(ಇ) ಕಾರ್ಮಿಕರಿಗೆ ಸರಿಯಾದ ಸಮಯಕ್ಕೆ ವೇತನ ದೊರಕಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ? (ವಿವರ ನೀಡುವುದು)